**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಇವರು ನಿಯಮ 330 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

"ರಾಜ್ಯದಲ್ಲಿ ನೂತನ ಪಿಂಚಣಿ ಯೋಜನೆ ಜಾರಿಗೊಳಿಸಿದ್ದರಿಂದ ಸುಮಾರು 2.50 ಲಕ್ಷ ನೌಕರರು ತೊಂದರೆಗೊಳಗಾಗಿದ್ದು, ಬೇರೆ ರಾಜ್ಯಗಳಲ್ಲಿ ಸಮಸ್ಯೆಯ ಗಂಭೀರತೆಯನ್ನು ಅರಿತುಕೊಂಡು ರಾಜಸ್ಥಾನ, ಛತ್ತಿಸಗಡ, ಜಾರ್ಖಂಡ ಹಾಗೂ ಪಶ್ಚಿಮ ಬಂಗಾಳಗಳಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲು ನಿರ್ಧರಿಸಿವೆ.

ಅದೇ ಮಾದರಿಯಲ್ಲಿ ನಮ್ಮ ರಾಜ್ಯದಲ್ಲಿರುವ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಅಧಿಕಾರಿಗಳ ಸಮಿತಿಯನ್ನು ಕೂಡಾ ರಚಿಸಿದ್ದು, ಸಮಿತಿಯ ಕ್ರಿಯಾಶೀಲವಾಗಿ ಕೆಲಸ ಮಾಡದೆ ಇರುವುದನ್ನು ಸಹ ಸರಕಾರ ಗಂಭೀರವಾಗಿ ಪರಿಗಣಿಸಿಲ್ಲ. ಇದರಿಂದಾಗಿ ನೂತನ ಪಿಂಚಣಿ ಯೋಜನೆಗೆ ಒಳಪಟ್ಟಿರುವ ನೌಕರರ ಕುಟುಂಬಗಳು ಭವಿಷ್ಯದಲ್ಲಿ ತೊಂದರೆಗೊಳಗಾಗಲಿದ್ದು, ಕೂಡಲೇ ಬೇರೆ ರಾಜ್ಯಗಳಿಲ್ಲಿನಂತೆ ನಮ್ಮ ರಾಜ್ಯದಲ್ಲಿ ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಲು ಒತ್ತಾಯಿಸುವೆ".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರಲ್ಲಿ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

**ಸಂಖ್ಯೆ:ಆಇ-ಪಿಇಎನ್/245/2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ